# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 04 (182)

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ

(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 13/09/2021.

ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ನಗರದಲ್ಲಿ ಸುಮಾರು 2015–16ರಲ್ಲಿ ಪ್ರಾರಂಭವಾದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮಹಾವಿದ್ಯಾಲಯ ಯಾವ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲಾಗುವುದು; | ಸರ್ಕಾರವು ದಿನಾಂಕ:13–01–2017 ರಲ್ಲಿ ಬೀದರ್ ಜಿಲ್ಲೆಯಲ್ಲಿ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಪ್ರಾರಂಭಿಸಲು ಅನುಮೋದನೆ ನೀಡಿದೆ.<br><br>ಸದರಿ ಸಂಸ್ಥೆಯ ನಿವೇಶನದ ಮಂಜೂರಾತಿಯ ವಿಳಂಬದಿಂದ ದಿನಾಂಕ: 27/08/2018 ರಿಂದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸಿದ್ದು, ಮೊದಲನೇ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ.<br><br>ಎ.ಐ.ಸಿ.ಟಿ.ಇ ಮಾರ್ಗಸೂಚಿಯಂತೆ ಕಟ್ಟಡ ಕಾಮಗಾರಿ ಪೂರ್ಣಗೊಳಿಸಿ, ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಎಐಸಿಟಿಇ ಅನುಮೋದನೆಯನ್ನು ಪಡೆದು ಕೂಡಲೇ ಕಾಲೇಜನ್ನು ಪ್ರಾರಂಭಿಸಲಾಗುವುದು. |
| ಆ) | ಕಟ್ಟಡ ಕಾಮಗಾರಿ ವಿಳಂಬವಾಗಲು ಕಾರಣವೇನು; ಇದರ ಅಂದಾಜು ವೆಚ್ಚ ಎಷ್ಟು; ಖರ್ಚಾದ ವೆಚ್ಚವೆಷ್ಟು; | ಸದರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ನಿವೇಶನದ ಲಭ್ಯತೆಯ ವಿಳಂಬದಿಂದಾಗಿ ಕಟ್ಟಡ ಕಾಮಗಾರಿಯನ್ನು ದಿನಾಂಕ: 27/08/2018 ರಿಂದ ಪ್ರಾರಂಭಿಸಲಾಗಿದ್ದು, ಮೊದಲನೇ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಎರಡನೇ ಹಂತದ ಕಾಮಗಾರಿ ಪ್ರಗತಿಯಲ್ಲಿದೆ.<br><br>ಅಂದಾಜು ವೆಚ್ಚ ರೂ.5800.00ಲಕ್ಷಗಳಾಗಿದ್ದು,<br>ರೂ. 4300.00 ಲಕ್ಷಗಳು ವೆಚ್ಚವಾಗಿರುತ್ತದೆ. |

| | | |
|---|---|---|
| ಇ) | ಈ ಕಟ್ಟಡ ಕಾಮಗಾರಿ ಯಾವ ಏಜೆನ್ಸಿಗೆ ನೀಡಲಾಗಿದೆ; ಕಟ್ಟಡ ಕಾಮಗಾರಿಯನ್ನು ಮುಗಿಸುವ ಅಂತಿಮ ಸಮಯವನ್ನು ಸರ್ಕಾರ ನೀಡಲಾಗಿದೆಯೆ; ನೀಡಿದ್ದಲ್ಲಿ, ಅದು ಯಾವ ವರ್ಷದಲ್ಲಿ/ಎಷ್ಟು ವರ್ಷಗಳಲ್ಲಿ ಮುಗಿಯಬೇಕಾಗಿತ್ತು; | ಮೆ: ರೈಟ್ಸ್ ಸಂಸ್ಥೆಗೆ ವಹಿಸಲಾಗಿದೆ.<br><br>ಹೌದು.<br><br>ದಿನಾಂಕ: 25/02/2023 ಅಂತಿಮ ಸಮಯ ನೀಡಲಾಗಿದೆ. |
| ಈ) | ಗಡುವು ನೀಡಿದ ಸಮಯದಲ್ಲಿ ಗುತ್ತಿಗೆದಾರರು ಕಾಮಗಾರಿ ಮುಗಿಸದಿದ್ದಲ್ಲಿ ಸರ್ಕಾರ ಯಾವ ರೀತಿಯಲ್ಲಿ ಕ್ರಮವಹಿಸುವುದು ? | ಸಂಬಂಧಪಟ್ಟ ಏಜೆನ್ಸಿ/ಗುತ್ತಿಗೆದಾರರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಇಡಿ 64 ಹೆಚ್‌ಪಿಟಿ 2021)

(ಡಾ: ಅಶ್ವಥನಾರಾಯಣ.ಸಿ.ಎನ್.)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ,
ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ
ಮತ್ತು ಕೌಶಲ್ಯಾಭಿವೃದ್ಧಿ ಸಚಿವರು.